**All India Radio: Bangalore**
**National Bulletin In Kannada**
**03.04.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**03.04.2025 13.10 a.m.**
**<><><><>**

**ಮುಖ್ಯಾಂಶಗಳು**

1. **ರಾಜ್ಯಸಭೆಯಲ್ಲಿಂದು ವಕ್ಫ್ ತಿದ್ದುಪಡಿ ವಿಧೇಯಕ - ೨೦೨೫ ಮಂಡನೆ**
2. **ಆರನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು ಬ್ಯಾಂಕಾಕ್ ತಲುಪಿದ ಪ್ರಧಾನಿ ನರೇಂದ್ರ ಮೋದಿ**
3. **ಭಾರತ ಸೇರಿದಂತೆ ಹಲವು ದೇಶಗಳ ಮೇಲೆ ಪ್ರತಿಸುಂಕ ವಿಧಿಸಿದ ಅಮೆರಿಕ**
4. **ಐಪಿಎಲ್ ಟಿ-೨೦ ಕ್ರಿಕೆಟ್ : ಕೊಲ್ಕೊತ್ತಾ ನೈಟ್ ರೈಡರ್ಸ್-ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿ**

<><><><>

**ವಿರೋಧ ಪಕ್ಷಗಳು ಮಂಡಿಸಿದ ತಿದ್ದುಪಡಿ ನಿರಾಕರಿಸಿ, ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ವಿಧೇಯಕ ೨೦೨೫ ಅನ್ನು ಅಂಗೀಕರಿಸಲಾಗಿದೆ.**

**ಲೋಕಸಭೆಯಲ್ಲಿ ನಿನ್ನೆ ತಡರಾತ್ರಿವರೆಗೂ ವಿಧೇಯಕದ ಮೇಲಿನ ಚರ್ಚೆಯ ನಂತರ ಮತಕ್ಕೆ ಹಾಕಲಾಯಿತು. ಲೋಕಸಭಾ ಸಭಾಧ್ಯಕ್ಷ ಓಂ ಬಿರ್ಲಾ ಅವರು, ವಿಧೇಯಕವನ್ನು ಸದನವು ಅಂಗೀಕರಿಸಿದೆ ಎಂದು ಘೋಷಿಸಿದರು.**

**೨೮೮ ಸದಸ್ಯರು ವಿಧೇಯಕದ ಪರವಾಗಿ ಮತ ಚಲಾಯಿಸಿದರು. ೨೩೨ ಸದಸ್ಯರು ವಿಧೇಯಕದ ವಿರುದ್ಧವಾಗಿ ಮತ ಚಲಾಯಿಸಿದರು. ವಕ್ಫ್ ತಿದ್ದುಪಡಿ ವಿಧೇಯಕವು ಪರಾಂಪರಿಕ ತಾಣಗಳನ್ನು ರಕ್ಷಿಸಲು ಮತ್ತು ಸಾಮಾಜಿಕ ಕಲ್ಯಾಣವನ್ನು ಉತ್ತೇಜಿಸಲು ನಿಬಂಧನೆಗಳೊಂದಿಗೆ ವಕ್ಫ್ ಆಸ್ತಿಗಳ ನಿರ್ವಹಣೆಯನ್ನು ಸುಗಮಗೊಳಿಸುವ ಗುರಿಯನ್ನು ಹೊಂದಿದೆ.**

ಆಸ್ತಿ ನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುವ ಮೂಲಕ, ವಕ್ಫ್ ಮಂಡಳಿಗಳು ಮತ್ತು ಸ್ಥಳೀಯ ಅಧಿಕಾರಿಗಳ ನಡುವಿನ ಸಮನ್ವಯವನ್ನು ಸುವ್ಯವಸ್ಥಿತಗೊಳಿಸುವ ಮೂಲಕ ಹಾಗೂ ಪಾಲುದಾರರ ಹಕ್ಕುಗಳನ್ನು ರಕ್ಷಿಸುವ ಮೂಲಕ ಆಡಳಿತವನ್ನು ಸುಧಾರಿಸುವ ಗುರಿಯನ್ನು ಹೊಂದಿದೆ. ವಿಧೇಯಕವು ಮುಸ್ಲಿಂ ಮಹಿಳೆಯರಿಗೆ, ವಿಶೇಷವಾಗಿ ವಿಧವೆಯರು ಹಾಗೂ ವಿಚ್ಛೇದಿತ ಮಹಿಳೆಯರ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಯನ್ನು ಸುಧಾರಿಸುವ ಗುರಿಯನ್ನು ಹೊಂದಿದೆ.

<><><>

ರಾಜ್ಯಸಭೆಯಲ್ಲಿ ಇಂದು ಮಧ್ಯಾಹ್ನ ವಕ್ಫ್ ತಿದ್ದುಪಡಿ ವಿಧೇಯಕ - ೨೦೨೫ ಅನ್ನು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಂಡಿಸಿದರು. ಇಂದು ಬೆಳಗ್ಗೆ ಸದನ ಸೇರಿದಾಗ ರಾಜ್ಯಸಭಾ ಸಭಾಪತಿ ಜಗದೀಪ್ ಧನ್‌ಕರ್ ಅವರು, ಮಧ್ಯಾಹ್ನ ವಿಧೇಯಕವನ್ನು ಕೈಗೆತ್ತಿಕೊಳ್ಳುವುದಾಗಿ ಘೋಷಿಸಿದರು. ಅದರಂತೆ ವಿಧೇಯಕದ ಮೇಲಿನ ಚರ್ಚೆ ಪ್ರಗತಿಯಲ್ಲಿದೆ.

<><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಸಂಸತ್ತಿನಲ್ಲಿ ವಕ್ಫ್ ತಿದ್ದುಪಡಿ ವಿಧೇಯಕ ಮಂಡಿಸಿರುವುದು ಐತಿಹಾಸಿಕ ನಿರ್ಣಯವಾಗಿದೆ ಎಂದು ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸಮಿತಿಯ ಸದಸ್ಯ ಡಾ.ಬಸವರಾಜ ಕ್ಯಾವಟರ್ ಅಭಿಪ್ರಾಯಪಟ್ಟಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ವಕ್ಫ್ ವಿಧೇಯಕ ಮಂಡನೆಯಿಂದ ರೈತರು ಹಾಗೂ ಸರ್ಕಾರದ ಜಾಗಗಳನ್ನು ರಕ್ಷಿಸಲು ಸಹಕಾರಿಯಾಗಿದೆ ಎಂದರು.

ಧ್ವನಿ : ಡಾ.ಬಸವರಾಜ ಕ್ಯಾವಟರ್ - ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸಮಿತಿಯ ಸದಸ್ಯರು

(೨೮ ಸೆಕೆಂಡ್)

<><><>

ಆರನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಥಾಯ್ಲೆಂಡ್‌ನ ಬ್ಯಾಂಕಾಕ್ ತಲುಪಿದ್ದಾರೆ. ಅವರನ್ನು ವಿಮಾನ ನಿಲ್ದಾಣದಲ್ಲಿ ಥಾಯ್ಲೆಂಡ್ ಉಪಪ್ರಧಾನಿ ಮತ್ತು ಸಾರಿಗೆ ಸಚಿವ ಸೂರ್ಯ ಆತ್ಮೀಯವಾಗಿ ಬರಮಾಡಿಕೊಂಡರು. ಪ್ರವಾಸಕ್ಕೂ ಮುನ್ನ ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಪ್ರಧಾನಿ

ನರೇಂದ್ರ ಮೋದಿ, ಕಳೆದ ದಶಕದಲ್ಲಿ ಬಂಗಾಳಕೊಲ್ಲಿ ಪ್ರದೇಶದಲ್ಲಿ ಪ್ರಾದೇಶಿಕ ಅಭಿವೃದ್ಧಿ, ಸಂಪರ್ಕ ಮತ್ತು ಆರ್ಥಿಕ ಪ್ರಗತಿಯನ್ನು ಉತ್ತೇಜಿಸಲು ಬಿಮ್‌ಸ್ಟೆಕ್ ಮಹತ್ವದ ವೇದಿಕೆಯಾಗಿ ಹೊರಹೊಮ್ಮಿದೆ ಎಂದು ಹೇಳಿದ್ದಾರೆ. ಭಾರತದ ಈಶಾನ್ಯ ಪ್ರದೇಶವು ತನ್ನ ಭೌಗೋಳಿಕ ಸ್ಥಾನದಿಂದಾಗಿ ಬಿಮ್‌ಸ್ಟೆಕ್‌ನ ಹೃದಯ ಭಾಗದಲ್ಲಿದೆ. ಬಿಮ್‌ಸ್ಟೆಕ್ ದೇಶಗಳ ನಾಯಕರನ್ನು ಭೇಟಿ ಮಾಡಲು ಮತ್ತು ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಪರಸ್ಪರ ಸಹಯೋಗವನ್ನು ಮತ್ತಷ್ಟು ಬಲಪಡಿಸಲು, ಉತ್ಪಾದಕವಾಗಿ ತೊಡಗಿಸಿಕೊಳ್ಳಲು ಎದುರು ನೋಡುತ್ತಿದ್ದೇನೆ ಎಂದು ಪ್ರಧಾನಿ ಹೇಳಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿಯವರು, ಬ್ಯಾಂಕಾಕ್‌ನಲ್ಲಿ ಥಾಯ್ಲೆಂಡ್ ಪ್ರಧಾನಿ ಪೇಟೊಂಗ್‌ಟಾರ್ನ್ ಶಿನವಾತ್ರ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. 'ಬಿಮ್‌ಸ್ಟೆಕ್ - ಸಮೃದ್ಧ, ಸ್ಥಿತಿಸ್ಥಾಪಕ ಮತ್ತು ಮುಕ್ತ" ಧ್ಯೇಯದೊಂದಿಗೆ ನಾಳೆ ನಡೆಯಲಿರುವ ೬ನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಬ್ಯಾಂಕಾಕ್ ವಿಷನ್ ೨೦೩೦ ಅನ್ನು ಅಂಗೀಕರಿಸಲಿದೆ.

<><><>

ಜಾಗತಿಕ ಕ್ರಮದಲ್ಲಿನ ಅನಿಶ್ಚಿತತೆಯನ್ನು ಗಮನದಲ್ಲಿಟ್ಟುಕೊಂಡು ಬಿಮ್‌ಸ್ಟೆಕ್ ಸದಸ್ಯ ರಾಷ್ಟ್ರಗಳು ಮಹತ್ವಾಕಾಂಕ್ಷೆಯ ದೃಷ್ಟಿಕೋನದಿಂದ ಸಂಘಟನೆಯನ್ನು ಹೆಚ್ಚು ಬಲಪಡಿಸಬೇಕು ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಒತ್ತಾಯಿಸಿದರು. ಥಾಯ್ಲೆಂಡ್‌ನ ಬ್ಯಾಂಕಾಕ್‌ನಲ್ಲಿ ನಡೆದ ೨೦ನೇ ಬಿಮ್‌ಸ್ಟೆಕ್ ಸಚಿವರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪವರ್ ಗ್ರಿಡ್ ಸಂಪರ್ಕಗಳು, ಡಿಜಿಟಲ್ ಮೂಲಸೌಕರ್ಯ, ವ್ಯಾಪಾರ ಚಟುವಟಿಕೆಗಳು, ಸಮುದ್ರ ಮತ್ತು ಭೂ ಸಾರಿಗೆ, ಕಡಲ ಆರ್ಥಿಕತೆ, ಆರೋಗ್ಯ, ಆಹಾರ ಇಂಧನ ಭದ್ರತೆಯಂತಹ ಕ್ಷೇತ್ರಗಳಲ್ಲಿ ಸದಸ್ಯ ರಾಷ್ಟ್ರಗಳು ಹೆಚ್ಚು ಗಮನಹರಿಸಬೇಕು ಎಂದು ಮನವಿ ಮಾಡಿದರು. ಸೈಬರ್ ಭದ್ರತೆ, ಭಯೋತ್ಪಾದನೆ ನಿಗ್ರಹ, ಮಾನವ ಕಳ್ಳಸಾಗಣೆ, ಮಾದಕವಸ್ತು ಕಳ್ಳಸಾಗಣೆ ಸೇರಿದಂತೆ ಅಕ್ರಮ ಚಟುವಟಿಕೆಗಳನ್ನು ಗಂಭೀರವಾಗಿ ಪರಿಗಣಿಸಿ, ಅವುಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಚಿವ ಡಾ. ಎಸ್. ಜೈಶಂಕರ್ ಪ್ರತಿಪಾದಿಸಿದರು.

<><><>

ಭಾರತ ಸೇರಿದಂತೆ ಹಲವಾರು ದೇಶಗಳ ಮೇಲೆ ಪ್ರತಿ ಸುಂಕಗಳನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಭಾರತದ ಆಮದುಗಳ ಮೇಲೆ ಶೇಕಡಾ ೨೬ ರಷ್ಟು ಪ್ರತಿ ಸುಂಕವನ್ನು ವಿಧಿಸಲಾಗುತ್ತದೆ. ಅಮೆರಿಕದ ಶ್ವೇತಭವನದ ಗುಲಾಬಿ ಉದ್ಯಾನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಸುಂಕಗಳು ಸಂಪೂರ್ಣವಾಗಿ ಪ್ರತಿ ಸುಂಕವಲ್ಲ. ಅಮೆರಿಕಕ್ಕೆ ಈ ದೇಶಗಳು ವಿಧಿಸುವ ಸುಂಕದ ಅರ್ಧದಷ್ಟು ಸುಂಕವನ್ನು ನಾವು ಆ ದೇಶಗಳಿಗೆ ವಿಧಿಸುತ್ತಿದ್ದೇವೆ ಎಂದು ಹೇಳಿದರು. ಯುರೋಪಿಯನ್ ಒಕ್ಕೂಟದ ರಾಷ್ಟ್ರಗಳ ಆಮದುಗಳ ಮೇಲೆ ಶೇಕಡಾ ೨೦ ರಷ್ಟು ಮತ್ತು ಬ್ರಿಟನ್‌ನ ಆಮದುಗಳ ಮೇಲೆ ಶೇಕಡಾ ೧೦ ರಷ್ಟು ಸುಂಕವನ್ನು ಹಾಗೂ ಜಪಾನ್‌ನ ಆಮದುಗಳ ಮೇಲೆ ಶೇಕಡಾ ೨೪ ರಷ್ಟು ಪ್ರತಿ ಸುಂಕವನ್ನು ವಿಧಿಸುವುದಾಗಿ ಅಮೆರಿಕ ಅಧ್ಯಕ್ಷರು ಘೋಷಿಸಿದ್ದಾರೆ.

<><><><>

ಮ್ಯಾನ್ಮಾರ್‌ನಲ್ಲಿ ಇತ್ತೀಚೆಗೆ ಸಂಭವಿಸಿದ ಭೀಕರ ಭೂಕಂಪದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೩ ಸಾವಿರದ ೩ ಕ್ಕೆ ಏರಿಕೆಯಾಗಿದ್ದು, ೪ ಸಾವಿರದ ೫೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.  ಈ ನಡುವೆ, ಪರಿಹಾರ ಕಾರ್ಯಗಳಿಗೆ ಅನುಕೂಲವಾಗುವಂತೆ ಮ್ಯಾನ್ಮಾರ್‌ನ ಆಡಳಿತಾರೂಢ ಸೇನೆಯು, ದೇಶದ ಅಂತರ್ಯುದ್ಧದಲ್ಲಿ ತಾತ್ಕಾಲಿಕ ಕದನ ವಿರಾಮವನ್ನು ಘೋಷಿಸಿದೆ. ಭೂಕಂಪದಿಂದ ತೊಂದರೆಗೊಳಗಾದ ಜನರಿಗೆ ಸಹಾಯ ಮಾಡಲು ಏಪ್ರಿಲ್ ೨೨ರವರೆಗೆ ಕದನ ವಿರಾಮ ಮುಂದುವರೆಯಲಿದೆ ಎಂದು ಮ್ಯಾನ್ಮಾರ್ ಸೇನೆ ತಿಳಿಸಿದೆ.

<><><><>

ನೆದರ್‌ಲ್ಯಾಂಡ್‌ನ ಹೇಗ್‌ನಲ್ಲಿ ನಡೆಯಲಿರುವ ಉತ್ತರ ಅಟ್ಲಾಂಟಿಕಾ ಒಪ್ಪಂದ ಸಂಸ್ಥೆ - ನ್ಯಾಟೊ ಶೃಂಗಸಭೆಗೆ ಸಿದ್ಧತೆ ನಡೆಸಲು ಮತ್ತು ಭದ್ರತಾ ಸಮಸ್ಯೆಗಳನ್ನು ಪರಿಹರಿಸಲು ನ್ಯಾಟೊ ವಿದೇಶಾಂಗ ಸಚಿವರು ನಾಳೆ ಬ್ರಸೆಲ್ಸ್‌ನಲ್ಲಿ ಸಭೆ ಸೇರಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ನ್ಯಾಟೊ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ,  ರಕ್ಷಣಾ ಹೂಡಿಕೆಯು ಮೈತ್ರಿಕೂಟದ ಭವಿಷ್ಯದ ಯಶಸ್ಸಿಗೆ ಅತ್ಯಗತ್ಯ. ಶಾಶ್ವತ ಶಾಂತಿಯನ್ನು ಖಚಿತಪಡಿಸಿಕೊಳ್ಳಲು ಮಿತ್ರಪಕ್ಷಗಳ ಪ್ರಯತ್ನಗಳು ಶ್ಲಾಘನೀಯ ಎಂದು ಹೇಳಿದರು. ೨೦

ಶತಕೋಟಿ ಯೂರೋಗಳಿಗಿಂತ ಹೆಚ್ಚಿನ ಭದ್ರತಾ ಸಹಾಯವನ್ನು ಘೋಷಿಸುವ ಮೂಲಕ ಉಕ್ರೇನ್‌ಗೆ ನ್ಯಾಟೊದ ಬಲವಾದ ಬದ್ಧತೆಯನ್ನು ಅವರು ಪುನರುಚ್ಚರಿಸಿದರು.

<><><><>

ಕೊಲ್ಕೊತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಇಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೊಲ್ಕೊತ್ತಾ ನೈಟ್ ರೈಡರ್ಸ್ ಮತ್ತು ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><><><>

ವಿಶ್ವ ಶ್ರವಣ ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ಮುಂಬೈನಲ್ಲಿ ಮೇ ೧ ರಿಂದ ೪ರವರೆಗೆ ನಡೆಯಲಿದೆ.  ಒಟ್ಟು ನಾಲ್ಕು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯಲ್ಲಿ ಮಾಧ್ಯಮಗಳ ಜಾಗತೀಕರಣ ಹಾಗೂ ಸ್ಥಾನೀಕರಣ, ಡಿಜಿಟಲ್ ಜಾಹೀರಾತು ಕ್ಷೇತ್ರದ ಭವಿಷ್ಯ, ಧ್ವನಿ ಮತ್ತು ಸಂಗೀತ ಕ್ಷೇತ್ರದಲ್ಲಿ ಹೊರ ಹೊಮ್ಮುತ್ತಿರುವ ಹೊಸ ಆಯಾಮ ಅನಿಮೇಷನ್, ಗೇಮಿಂಗ್, ಕಾಮಿಕ್ಸ್, ಆಗ್ಮೆಂಟಡ್ ವರ್ಚುವಲ್ ರಿಯಾಲಿಟಿ, ಜನರೇಟಿವ್ ಎಐ, ಮೆಟಾವರ್ಸ್ ಮೊದಲಾದ ತಾಂತ್ರಿಕ ಮುನ್ನಡೆಗಳ ಬಗ್ಗೆ ಚರ್ಚಿಸಲಾಗುತ್ತದೆ. ವೇವ್ಸ್ ಶೃಂಗಸಭೆಯು ಜಗತ್ತಿನಾದ್ಯಂತದ ಸೃಜನಕಾರರಿಗೆ ಪರಿಪೂರ್ಣ ವೇದಿಕೆಯಾಗುವುದಲ್ಲದೆ, ಜಾಗತಿಕ ಮನರಂಜನೆಯ ಭವಿಷ್ಯವನ್ನು ಬದಲಾಯಿಸುವ ವಿಶ್ವದ ಅತ್ಯಂತ ಶಕ್ತಿಶಾಲಿ ಸಭೆಯಾಗಿದೆ. ಅನಿಮೇಷನ್, ಗೇಮಿಂಗ್, ವಿಷುಯಲ್ ಎಫೆಕ್ಟ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿಯಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಲು ಸೃಜನಕಾರರು, ಉದ್ಯಮಿಗಳು ಮತ್ತು ಹೂಡಿಕೆದಾರರನ್ನು ವೇವ್ಸ್ ಒಟ್ಟುಗೂಡಿಸಲಿದೆ. ಅನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್, ಕಾಮಿಕ್ಸ್ ಮತ್ತು  ಎಕ್ಸ್‌ಟೆಂಡೆಡ್ ರಿಯಾಲಿಟಿ ವಲಯಗಳಲ್ಲಿ ಭಾರತವನ್ನು ಜಾಗತಿಕ ಶಕ್ತಿ ಕೇಂದ್ರವನ್ನಾಗಿ ಮಾಡುವ ದೃಷ್ಟಿಕೋನದೊಂದಿಗೆ, ಈ ಶೃಂಗಸಭೆಯು ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಗಡಿಯಾಚೆಗಿನ ಸಹಯೋಗಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

<><><><>

ಜೆಮ್‌ಶೆಡ್‌ಪುರದ ಜೆಆರ್‌ಡಿ ಟಾಟಾ ಕ್ರೀಡಾ ಸಂಕೀರ್ಣದಲ್ಲಿ ಇಂದು ನಡೆಯಲಿರುವ ಇಂಡಿಯನ್ ಸೂಪರ್ ಲೀಗ್ ಪುಟ್ಬಾಲ್ ಪಂದ್ಯದಲ್ಲಿ ಜೆಮ್‌ಶೆಡ್‌ಪುರ ಮತ್ತು ಮೋಹನ್ ಬಗನ್ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>